ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 21ನೇ ಮಾರ್ಚ್, 2020

ಆರೋಗ್ಯ ಇಲಾಖೆಯ ಗುತ್ತಿಗೆ ನೌಕರರ ಖಾಯಂಮಾತಿ ಕುರಿತು

ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ)

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

211 (1688+1763) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಆರೋಗ್ಯ ಇಲಾಖೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಸುಮಾರು 20 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಶುಶ್ರೂಷಕರುಗಳು ರೋಸ್ಟರ್ ಕಂ ಮೆರಿಟ್ ಆಧಾರದ ಮೇಲೆ ಆಯ್ಕೆಯಾಗಿದ್ದವರು ಖಾಯಂ ಆಗದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ; (ಮಾಹಿತಿ ನೀಡುವುದು) ಯಾವಾಗ ಖಾಯಂಗೊಳಿಸಲಾಗುವುದು ; (ವಿವರ ನೀಡುವುದು)

(ಇ) ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಂಡ ವೈದ್ಯರು, ಲ್ಯಾಬ್ ಟೆಕ್ನೀಷಿಯನ್, ಕ್ಷ-ಕಿರಣ ತಜ್ಞರು, ಆಪ್ತಮಾಲೋಜಿಸ್ಟ್, ವಾಹನ ಚಾಲಕರುಗಳನ್ನು ಈಗಾಗಲೇ ಖಾಯಂಗೊಳಿಸಲಾಗಿದ್ದು, ಸ್ಟಾಫ್ ನರ್ಸ್‌ಗಳನ್ನು ಖಾಯಂಗೊಳಿಸದಿರಲು ಕಾರಣವೇನು ; ಇವರುಗಳನ್ನು ಖಾಯಂಗೊಳಿಸುವ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮವೇನು ;

(ಈ) ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಶುಶ್ರೂಷಕರುಗಳಿಗೆ ಸಮಾನ ಕೆಲಸಕ್ಕೆ-ಸಮಾನ ವೇತನ ನೀಡುತ್ತಿದ್ದು, ಆದರೆ ಅದೇ ರೀತಿಯ ಕೆಲಸ ನಿರ್ವಹಿಸುತ್ತಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಶುಶ್ರೂಷಕರುಗಳಿಗೆ ಸಮಾನ ಕೆಲಸಕ್ಕೆ-ಸಮಾನ ವೇತನ ನೀಡುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)